ವಿ. ರಶ್ಮಿ, ಭಾ. ಆ. ಸೇ.
ಸರ್ಕಾರದ ಕಾರ್ಯದರ್ಶಿ
V. RASHMI, I.A.S.
Secretary to Government

GOVERNMENT OF KARNATAKA

ಕರ್ನಾಟಕ ಸರ್ಕಾರ ಸಚಿವಾಲಯ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ
Karnataka Government Secretariat
Rural Development & Panchayat Raj Department

ಅ.ಸ.ಪತ್ರ ಸಂಖ್ಯೆ: ಗ್ರಾಅಪ 211 ಗ್ರಾಪಂಅ 2013 ದಿನಾಂಕ: 03-06-2013

ಮಾನ್ಯರೆ,

ವಿಷಯ: ಗ್ರಾಮ, ತಾಲ್ಲೂಕು ಮತ್ತು ಜಿಲ್ಲಾ ಪಂಚಾಯಿತಿಗಳು ಶಾಸನಬದ್ಧ ಸಭೆಗಳನ್ನು ನಿಯಮಿತ ಕಾಲದಲ್ಲಿ ನಡೆಸಿ ನಡವಳಿಗಳನ್ನು ಸಾರ್ವಜನಿಕ ಮಾಹಿತಿಗಾಗಿ ಪ್ರಕಟಿಸುವ ಬಗ್ಗೆ.

ಉಲ್ಲೇಖ: ಸರ್ಕಾರದ ಸುತ್ತೋಲೆ ಸಂಖ್ಯೆ: ಗ್ರಾಅಪ 09 ಗ್ರಾಪಂಅ 2012, ದಿನಾಂಕ: 07-01-2013.

-----

ಉಲ್ಲೇಖಿತ ಸರ್ಕಾರದ ಸುತ್ತೋಲೆಯಲ್ಲಿ ಗ್ರಾಮ, ತಾಲ್ಲೂಕು ಮತ್ತು ಜಿಲ್ಲಾ ಪಂಚಾಯಿತಿಗಳು ಶಾಸನಬದ್ಧ ಸಭೆಗಳನ್ನು ನಿಯಮಿತ ಕಾಲದಲ್ಲಿ ನಡೆಸಿ ನಡವಳಿಗಳನ್ನು ಸಾರ್ವಜನಿಕ ಮಾಹಿತಿಗಾಗಿ ಪ್ರಕಟಿಸುವ ಬಗ್ಗೆ ಸವಿವರವಾಗಿ ಸೂಚಿಸಲಾಗಿದೆ.

2. ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 52 ರಲ್ಲಿ ಗ್ರಾಮ ಪಂಚಾಯಿತಿಯ ಕಾರ್ಯಕಲಾಪವನ್ನು ನಡೆಸುವುದಕ್ಕಾಗಿ, ಗ್ರಾಮ ಪಂಚಾಯಿತಿಯ ಕಛೇರಿಯಲ್ಲಿ ಕನಿಷ್ಠ ಪಕ್ಷ ಒಂದು ತಿಂಗಳಿಗೊಮ್ಮೆ ಮತ್ತು ಅಧ್ಯಕ್ಷನು ನಿರ್ಧರಿಸಬಹುದಾದಂಥ ಕಾಲದಲ್ಲಿ ಸಭೆ ನಡೆಸಲು ಅವಕಾಶ ಕಲ್ಪಿಸಲಾಗಿದೆ. ಸದರಿ ಅಧಿನಿಯಮದ ಪ್ರಕರಣ 61 ರಲ್ಲಿ ಸ್ಥಾಯಿ ಸಮಿತಿ ಸಭೆ ಮತ್ತು ಪ್ರಕರಣ 61-ಎ ರಲ್ಲಿ ಇತರೆ ಸಮಿತಿ ಸಭೆಗಳನ್ನು ನಡೆಸಲು ಅವಕಾಶ ಕಲ್ಪಿಸಲಾಗಿದೆ. ಆದರೆ ಸಕಾಲದಲ್ಲಿ ಈ ಸಭೆಗಳು ಆಗುತ್ತಿಲ್ಲ. ಅಲ್ಲದೆ ಕೆಲವು ಕಡೆ ಸಭೆಗಳು ನಡೆದರೂ ನಡವಳಿಗಳು ಕೂಡಲೇ ತಯಾರು ಆಗುತ್ತಿಲ್ಲ. ಜಿಲ್ಲಾ ಪಂಚಾಯಿತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಹಂತದಲ್ಲಿ ಮತ್ತು ತಾಲ್ಲೂಕು ಪಂಚಾಯಿತಿಯ ಕಾರ್ಯನಿರ್ವಾಹಕ ಅಧಿಕಾರಿಗಳ ಹಂತದಲ್ಲಿ ಪ್ರತಿ ತಿಂಗಳು ಗ್ರಾಮ ಪಂಚಾಯಿತಿಗಳ ಶಾಸನಬದ್ಧ ಸಭೆಗಳು ನಡೆದಿವೆಯೆ ಅಥವಾ ಇಲ್ಲವೆ ಎಂದು ಪರಿಶೀಲಿಸಬೇಕು. ಸಕಾಲದಲ್ಲಿ ಸಭೆಗಳು ನಡೆಯದೆ ಇಲ್ಲದಿದ್ದಲ್ಲಿ ಪರಿವೀಕ್ಷಣೆ, ಮೇಲ್ವಿಚಾರಣೆ ಮತ್ತು ಉಸ್ತುವಾರಿ ಕೆಲಸದಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಮತ್ತು ಕಾರ್ಯನಿರ್ವಾಹಕ ಅಧಿಕಾರಿಗಳು ವಿಫಲರಾಗಿರುವುದು ಕಂಡು ಬರುತ್ತದೆ. ಮತ್ತು ಎಲ್ಲಾ ಸಭೆಗಳ ನಡವಳಿಗಳನ್ನು ಕೂಡಲೇ ಪಂಚತಂತ್ರ ತಂತ್ರಾಂಶದಲ್ಲಿ ಕಡ್ಡಾಯವಾಗಿ ಸ್ಕ್ಯಾನ್ ಮಾಡಿ ಅಪ್ ಲೋಡ್ ಮಾಡಲು ಕ್ರಮ ವಹಿಸುವಂತೆ ಮತ್ತೆ ಪುನರುಚ್ಛರಿಸಲಾಗಿದೆ. ಇದಲ್ಲದೆ ಕೂಡಲೇ ನಡವಳಿಯನ್ನು ತಯಾರಿಸಿ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 55 ರಂತೆ ಗ್ರಾಮ ಪಂಚಾಯಿತಿಯ ಸೂಚನಾ ಫಲಕದಲ್ಲಿ ಪ್ರಕಟಿಸತಕ್ಕದ್ದು.

3. ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 141 ರಲ್ಲಿ ತಾಲ್ಲೂಕು ಪಂಚಾಯಿತಿಯ ಕಾರ್ಯಕಲಾಪದ ನಿರ್ವಹಣೆಗಾಗಿ ಸಭೆಯನ್ನು ಕನಿಷ್ಠ ಪಕ್ಷ ಎರಡು ತಿಂಗಳಲ್ಲಿ ಒಂದು ಬಾರಿ ನಡೆಸಲು ಅವಕಾಶ ಕಲ್ಪಿಸಲಾಗಿದೆ. ಸದರಿ ಅಧಿನಿಯಮದ ಪ್ರಕರಣ 149 ರಲ್ಲಿ ಸ್ಥಾಯಿ ಸಮಿತಿ ಸಭೆ ನಡೆಸಲು ಅವಕಾಶ ಕಲ್ಪಿಸಲಾಗಿದೆ. ಆದರೆ ಸಕಾಲದಲ್ಲಿ ಈ ಸಭೆಗಳು ಆಗುತ್ತಿಲ್ಲ. ಅಲ್ಲದೆ ಕೆಲವು ಕಡೆ ಸಭೆಗಳು ನಡೆದರೂ ನಡವಳಿಗಳು ಕೂಡಲೇ ತಯಾರು ಆಗುತ್ತಿಲ್ಲ. ಜಿಲ್ಲಾ ಪಂಚಾಯಿತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಹಂತದಲ್ಲಿ ಪ್ರತಿ ತಿಂಗಳು ಅವರ ಮಾಸಿಕ ಸಭೆಯಲ್ಲಿ ತಾಲ್ಲೂಕು

-2-

ಪಂಚಾಯಿತಿಗಳ ಶಾಸನಬದ್ಧ ಸಭೆಗಳು ನಡೆದಿವೆಯೆ ಅಥವಾ ಇಲ್ಲವೆ ಎಂದು ಪರಿಶೀಲಿಸಬೇಕು. ಸಕಾಲದಲ್ಲಿ ಸಭೆಗಳು ನಡೆಯದೆ ಇಲ್ಲದಿದ್ದಲ್ಲಿ ಪರಿವೀಕ್ಷಣೆ, ಮೇಲ್ವಿಚಾರಣೆ ಮತ್ತು ಉಸ್ತುವಾರಿ ಕೆಲಸದಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ವಿಫಲರಾಗಿರುವುದು ಕಂಡು ಬರುತ್ತದೆ. ಮತ್ತು ಎಲ್ಲಾ ಸಭೆಗಳ ನಡವಳಿಗಳನ್ನು ಕೂಡಲೇ ಕಡ್ಡಾಯವಾಗಿ ಸ್ಕ್ಯಾನ್ ಮಾಡಿ ಪಂಚತಂತ್ರ ತಂತ್ರಾಂಶದಲ್ಲಿ ಅಪ್ ಲೋಡ್ ಮಾಡಲು ಕ್ರಮ ವಹಿಸುವಂತೆ ಮತ್ತೆ ಪುನರುಚ್ಚರಿಸಲಾಗಿದೆ. ಇದಲ್ಲದೆ ಕೂಡಲೇ ನಡವಳಿಯನ್ನು ತಯಾರಿಸಿ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 141 ರಂತೆ ತಾಲ್ಲೂಕು ಪಂಚಾಯಿತಿಯ ಸೂಚನಾ ಫಲಕದಲ್ಲಿ ಪ್ರಕಟಿಸತಕ್ಕದ್ದು. ಕೆಲವು ತಾಲ್ಲೂಕು ಪಂಚಾಯಿತಿಗಳು ಇದುವರೆವಿಗೂ ಸ್ಥಾಯಿ ಸಮಿತಿಗಳನ್ನು ರಚಿಸದಿರುವುದು ಕಂಡು ಬಂದಿರುತ್ತದೆ. ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳು ಕೂಡಲೇ ಸ್ಥಾಯಿ ಸಮಿತಿಗಳನ್ನು ರಚಿಸತಕ್ಕದ್ದು.

4. ಹಾಗೆಯೇ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 180 ರಲ್ಲಿ ಜಿಲ್ಲಾ ಪಂಚಾಯಿತಿಯ ಕಾರ್ಯಕಲಾಪದ ನಿರ್ವಹಣೆಗಾಗಿ ಸಭೆಯನ್ನು ಕನಿಷ್ಠ ಪಕ್ಷ ಎರಡು ತಿಂಗಳಲ್ಲಿ ಒಂದು ಬಾರಿ ನಡೆಸಲು ಅವಕಾಶ ಕಲ್ಪಿಸಲಾಗಿದೆ. ಸದರಿ ಅಧಿನಿಯಮದ ಪ್ರಕರಣ 186 ರಲ್ಲಿ ಸ್ಥಾಯಿ ಸಮಿತಿ ಸಭೆ ನಡೆಸಲು ಅವಕಾಶ ಕಲ್ಪಿಸಲಾಗಿದೆ. ಆದರೆ ಸಕಾಲದಲ್ಲಿ ಈ ಸಭೆಗಳು ಆಗುತ್ತಿಲ್ಲ. ಅಲ್ಲದೆ ಕೆಲವು ಕಡೆ ಸಭೆಗಳು ನಡೆದರೂ ನಡವಳಿಗಳು ಕೂಡಲೇ ತಯಾರು ಆಗುತ್ತಿಲ್ಲ. ಮತ್ತು ಎಲ್ಲಾ ಸಭೆಗಳ ನಡವಳಿಗಳನ್ನು ಕೂಡಲೇ ಜಿಲ್ಲಾ ಪಂಚಾಯಿತಿ ವೆಬ್‌ಸೈಟ್ ನಲ್ಲಿ ಕಡ್ಡಾಯವಾಗಿ ಸ್ಕ್ಯಾನ್ ಮಾಡಿ ಅಪ್ ಲೋಡ್ ಮಾಡಲು ಕ್ರಮ ವಹಿಸುವಂತೆ ಮತ್ತೆ ಪುನರುಚ್ಚರಿಸಲಾಗಿದೆ. ಇದಲ್ಲದೆ ಕೂಡಲೇ ನಡವಳಿಯನ್ನು ತಯಾರಿಸಿ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 180 ರಂತೆ ಜಿಲ್ಲಾ ಪಂಚಾಯಿತಿಯ ಸೂಚನಾ ಫಲಕದಲ್ಲಿ ಪ್ರಕಟಿಸತಕ್ಕದ್ದು. ಕೆಲವು ಜಿಲ್ಲಾ ಪಂಚಾಯಿತಿಗಳು ಇದುವರೆವಿಗೂ ಸ್ಥಾಯಿ ಸಮಿತಿಗಳನ್ನು ರಚಿಸದಿರುವುದು ಕಂಡು ಬಂದಿರುತ್ತದೆ. ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಕೂಡಲೇ ಸ್ಥಾಯಿ ಸಮಿತಿಗಳನ್ನು ರಚಿಸತಕ್ಕದ್ದು.

5. ತಾಲ್ಲೂಕು ಪಂಚಾಯಿತಿಯ ಕಾರ್ಯನಿರ್ವಾಹಕ ಅಧಿಕಾರಿಗಳು ಗ್ರಾಮ ಪಂಚಾಯತ್‌ಗಳಿಗೆ ಸಂಬಂಧಿಸಿದ ಎಲ್ಲಾ ಮಾಹಿತಿಗಳನ್ನು ಪಂಚತಂತ್ರದಲ್ಲಿ ಅಳವಡಿಸಲು ಕ್ರಮ ಕೈಗೊಳ್ಳುವಂತೆ ಸೂಚಿಸಿದೆ ಹಾಗೂ ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳು ಪ್ರತಿ ಪಾಕ್ಷಿಕವಾಗಿ ನಡೆಸುವ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳ ಸಭೆಯಲ್ಲಿ ಪಂಚತಂತ್ರ ತಂತ್ರಾಂಶದ ಮಾಹಿತಿಯನ್ನಾಧರಿಸಿಯೇ ಎಲ್ಲಾ ವಿಷಯಗಳ ಬಗ್ಗೆ ಪರಿಶೀಲನೆ ನಡೆಸುವುದು.

6. ಎಲ್ಲಾ ಜಿಲ್ಲಾ ಪಂಚಾಯಿತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಪ್ರತಿ ಮಾಹೆ ಜರುಗಿಸುವ ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳ ಸಭೆಯಲ್ಲಿ ಪಂಚತಂತ್ರ ತಂತ್ರಾಂಶದಲ್ಲಿ ಅಳವಡಿಸಿರುವ ಮಾಹಿತಿಯ ಆಧಾರದ ಮೇಲೆ ಪರಿಶೀಲನೆ ನಡೆಸುವಂತೆ ಸೂಚಿಸಿದೆ.

**ವಂದನೆಗಳೊಡನೆ,**

ತಮ್ಮ ವಿಶ್ವಾಸಿ,

Krishna N.

**ಎಲ್ಲಾ ಜಿಲ್ಲಾ ಪಂಚಾಯತಿ**
**ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು**